# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 157 |
| ಸದಸ್ಯರ ಹೆಸರು | ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 10.07.2018 |
| ಉತ್ತರಿಸುವವರು | ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಪುರಸಭೆ ಮತ್ತು ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ರಸ್ತೆಯ ತ್ಯಾಜ್ಯ ವಿಲೇವಾರಿಗೆ ವೆಚ್ಚ ಮಾಡುತ್ತಿರುವ ಮೊತ್ತವೆಷ್ಟು; ಈ ಸ್ವಚ್ಛತಾ ಕಾರ್ಮಿಕರಿಗೆ ನೀಡುವ ವೇತನವೆಷ್ಟು; | ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ(ಮಹಾನಗರಪಾಲಿಕೆ, ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ) ವ್ಯಾಪ್ತಿಯಲ್ಲಿ ರಸ್ತೆಯ ತ್ಯಾಜ್ಯ ವಿಲೇವಾರಿಗೆ ವೆಚ್ಚವಾಗಿರುವ ಒಟ್ಟು ವಾರ್ಷಿಕ ಮೊತ್ತ ರೂ. 13057.08 ಲಕ್ಷ ಆಗಿದ್ದು, ಸ್ವಚ್ಛತಾ ಕಾರ್ಮಿಕರಿಗೆ ನೀಡುವ ಒಟ್ಟು ವಾರ್ಷಿಕ ವೇತನ ರೂ.43894.78 ಲಕ್ಷ ಆಗಿರುತ್ತದೆ. |
| (ಆ) | ರಾಜ್ಯಾದ್ಯಂತ ಇರುವ ಪುರಸಭೆ ಮತ್ತು ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಎಷ್ಟು ಸ್ವಚ್ಛತಾ ಕಾರ್ಮಿಕರಿದ್ದಾರೆ; ಇವರಲ್ಲಿ ಖಾಯಂ ನೌಕರರ ಸಂಖ್ಯೆ ಎಷ್ಟು; ಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು; ಹೊರಗುತ್ತಿಗೆ ಕಾರ್ಮಿಕರ ಸಂಖ್ಯೆ ಎಷ್ಟು; ಈ ಸ್ವಚ್ಛತಾ ಕಾರ್ಮಿಕರನ್ನು ಖಾಯಂಗೊಳಿಸಲು ಸರ್ಕಾರ ಕೈಗೊಂಡ ಕ್ರಮವೇನು? | ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಒಟ್ಟು 23918 ಸ್ವಚ್ಛತಾ ಕಾರ್ಮಿಕರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ವಿವರ ಕೆಳಕಂಡಂತಿದೆ.<br>ಖಾಯಂ ಸ್ವಚ್ಛತಾ ಕಾರ್ಮಿಕರು – 7313<br>ಹೊರಗುತ್ತಿಗೆ ಸ್ವಚ್ಛತಾ ಕಾರ್ಮಿಕರು– 16605<br>ಕರ್ನಾಟಕ ಪುರಸಭೆಗಳ (ನಗರಸಭೆಗಳು, ಪುರಸಭೆಗಳು ಮತ್ತು ಪಟ್ಟಣ ಪಂಚಾಯಿತಿಗಳ ಪೌರಕಾರ್ಮಿಕರ ನೇಮಕಾತಿ) (ವಿಶೇಷ) ನಿಯಮಗಳು 2017ರ ನಿಯಮಗಳ ರೀತ್ಯಾ ಹಾಲಿ ಕೆಲಸ ನಿರ್ವಹಿಸುತ್ತಿರುವ ದಿನಗೂಲಿ/ ಕ್ಷೇಮಾಭಿವೃದ್ಧಿ/ಗುತ್ತಿಗೆ/ಹೊರಗುತ್ತಿಗೆ ಇತ್ಯಾದಿ ಪೌರಕಾರ್ಮಿಕರನ್ನು ನೇರ ನೇಮಕಾತಿ ಖೋಟಾದಲ್ಲಿ ಖಾಲಿ ಇರುವ ಪೌರಕಾರ್ಮಿಕರ ಹುದ್ದೆಗಳಿಗೆ ಖಾಯಂ ನೇಮಕಾತಿ ಮಾಡಿಕೊಳ್ಳಲು ಅಧಿಸೂಚನೆಯನ್ನು ಜಿಲ್ಲಾಧಿಕಾರಿಗಳ ಹಂತದಲ್ಲಿ ಹೊರಡಿಸಲಾಗಿದೆ. |

ಸಂಖ್ಯೆ: ನಅಇ 150 ಜಿಇಎಲ್ 2018

(ರಮೇಶ್ ಲ. ಜಾರಕೀಹೊಳಿ)
ಪೌರಾಡಳಿತ, ಸ್ಥಳೀಯ ಸಂಸ್ಥೆಗಳು,
ಹಾಗೂ ಬಂದರು ಮತ್ತು
ಒಳನಾಡು ಜಲಸಾರಿಗೆ ಸಚಿವರು